**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.3113/2023**

**ಸಿ.ಡಬ್ಲ್ಯೂ-2**

**ಪಿ.ಡಬ್ಲ್ಯೂ-1**

| | |
|---|---|
| ಸಾಕ್ಷಿಯ ಹೆಸರು | : ಮುಸ್ತಾಕ ಮುಲ್ಲಾ |
| ತಂದೆ/ಗಂಡನ ಹೆಸರು | : ಮಹಮ್ಮದಹನೀಫ |
| ವಯಸ್ಸು | : 45 ವರ್ಷ |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಝಳಕಿ |

**ದಿನಾಂಕ:30-01-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ಚಾಸಾ 3 ರವರ ಪರಿಚಯ ಇರುತ್ತದೆ. ಸದರಿಯವರು ಈಗ ಮರಣ ಹೊಂದಿರುತ್ತಾರೆ. ಈಗ್ಗೆ 2-3 ವರ್ಷಗಳ ಹಿಂದೆ ನಾನು ಪೊಲಿಸ ಠಾಣೆಗೆ ಹೋದಾಗ ಪೊಲೀಸರು ಒಂದು ದಾಖಲೆ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ಆದರೆ ಅದರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದು ದಾಳಿ ಪಂಚನಾಮೆಯಾಗಿದ್ದು ಅದನ್ನು ನಿ.ಪಿ.1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ಮುದ್ದೆಮಾಲುಗಳನ್ನು ವಶಕ್ಕೆ ಪಡೆದಿರುವುದಿಲ್ಲ. ಘಟನೆ ಕುರಿತು ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

-2-

**ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದ:**

ದಿಃ09.06.2023 ರಂದು ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಸಂಜೆ 07.00 ರಿಂದ 08.00 ರ ವರೆಗೆ ಪಂಚನಾಮೆಯನ್ನು ಮಾಡಿ ಸ್ಥಳದಲ್ಲಿ ಡಿ.ಕೆ. ಡಬಲ್ ಕಿಕ್ಕ ವಿಸ್ಕಿ ಕಂಪನಿಯ 45 ಪೌಚುಗಳನ್ನು ವಶಪಡಿಸಿಕೊಂಡು ಅದರಿಂದ ಒಂದು ಪೌಚನ್ನು ರಾ.ಪ. ಕುರಿತು ತೆಗೆದು ಪಂಚನಾಮೆಗೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**